## <u>ಕರ್ನಾಟಕ ಸರ್ಕಾರದ ನಡವಳಿಗಳು</u>

**ವಿಷಯ:** 2022-23ನೇ ಸಾಲಿನಲ್ಲಿ ಸ್ತ್ರೀ ಒಕ್ಕೂಟದ ಸದಸ್ಯರುಗಳ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖಾ ಸಹಯೋಗದೊಂದಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ಹೆಚ್ಚುವರಿಯಾಗಿ 750 ವರ್ಕ್‌ಶೆಡ್ ನಿರ್ಮಿಸುವ ಕುರಿತು.

**ಓದಲಾಗಿದೆ:** 1. 2022-23ನೇ ಸಾಲಿನ ಆಯವ್ಯಯ ಘೋಷಣ ಕಂಡಿಕೆ-204(ಈ)
2.ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಇವರ ಏಕ ಕಡತ ಸಂಖ್ಯೆ:kSRLPS/ಸ/ಹಾ/ಬ/01/2022-23.
3.ಕೌಉಜೀಇ 56 ಉಜೀಇ 2022 (ಭಾಗ-2)ರ ಕಂಡಿಕೆ 4ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಮತಿ

******

<u>ಪ್ರಸ್ತಾವನೆ:</u>

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 204 (ಈ)ರಲ್ಲಿ ಮಹಿಳಾ ಸ್ವ-ಸಹಾಯ ಗುಂಪಿನ ಒಕ್ಕೂಟದ ಸದಸ್ಯರಿಗೆ ಜೀವನೋಪಾಯ ಚಟುವಟಿಕೆಗಳನ್ನು ಕೈಗೊಳ್ಳಲು ಮಹತ್ಮಾಗಾಂಧಿ ನರೇಗಾ ಯೋಜನೆಯಡಿ 2022-23ನೇ ಸಾಲಿನಲ್ಲಿ ಹೆಚ್ಚುವರಿಯಾಗಿ 750 ವರ್ಕ್‌ಶೆಡ್ ನಿರ್ಮಿಸಲಾಗುವುದು ಎಂದು ಘೋಷಿಸಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ಅಭಿಯಾನ ನಿರ್ದೇಶಕರು, ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಇವರು ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಸ್ವ-ಸಹಾಯ ಗುಂಪುಗಳ ರಚನೆಯಾಗಿದ್ದು, ಅವುಗಳನ್ನು ಬಲಪಡಿಸಲು ಸಂಜೀವಿನಿ ಸಂಸ್ಥೆಯಿಂದ ವಾರ್ಡ್ ಮಟ್ಟದ ಒಕ್ಕೂಟ ಮತ್ತು ಗ್ರಾಮಪಂಚಾಯಿತಿ ಮಟ್ಟದ ಒಕ್ಕೂಟದ ವ್ಯಾಪ್ತಿಗೆ ಬರುವ ಸ್ವ-ಸಹಾಯ ಗುಂಪುಗಳು ವೈಯಕ್ತಿಕವಾಗಿ ಗುಂಪು ಸೇರಿ ಜೀವನೋಪಾಯ ಚಟುವಟಿಕೆಗಳನ್ನು ಪ್ರಾರಂಭಿಸಿದ್ದು, ಈ ಚಟುವಟಿಕೆಗಳನ್ನು ಬಲಪಡಿಸಲು ಗುಂಪಿನ ಸದಸ್ಯರಿಗೆ ಸಂಜೀವಿನಿ-ಕೆಎಸ್‌ಆರ್‌ಎಲ್‌ಪಿಎಸ್ ಸಂಸ್ಥೆ ವತಿಯಿಂದ ತರಬೇತಿ-ಮಾರುಕಟ್ಟೆ ವ್ಯವಸ್ಥೆ ಹಣಕಾಸು ನೆರವನ್ನು ನೀಡಿ ಪ್ರೋತ್ಸಾಹಿಸಲಾಗುತ್ತಿದೆ. ಗ್ರಾಮೀಣ ಪ್ರದೇಶದಲ್ಲಿ ಸ್ವ-ಸಹಾಯ ಗುಂಪುಗಳ ಜೀವನೋಪಾಯ ಚಟುವಟಿಕೆಗಳನ್ನು ಅಂದರೆ ಹೈನುಗಾರಿಕೆ ಕೃಷಿ ಮತ್ತು ಕೃಷಿಯೇತರ ಜೀವನೋಪಾಯ ಚಟುವಟಿಕೆಗಳನ್ನು ಗುಂಪಿನಲ್ಲಿ ಹಮ್ಮಿಕೊಳ್ಳಲು ಹೆಚ್ಚಿನ ಗ್ರಾಮಗಳಲ್ಲಿ ಸ್ಥಳದ ಕೊರತೆಯಿರುವುದರಿಂದ ಈಗಾಗಲೇ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನರೇಗಾ ಯೋಜನೆಯಡಿ 90ಕ್ಕೂ ಹೆಚ್ಚು ವರ್ಕ್‌ಶೆಡ್‌ಗಳನ್ನು ನಿರ್ಮಾಣ ಮಾಡಲಾಗಿದ್ದು, ಅವುಗಳನ್ನು ಅವಶ್ಯಕವಾಗಿ ಬಳಕೆ ಮಾಡಿಕೊಳ್ಳಲಾಗುತ್ತಿದೆ. 66 ವರ್ಕ್‌ಶೆಡ್ ನಿರ್ಮಾಣದ ಹಂತದಲ್ಲಿದ್ದು, ಇನ್ನು ಹೆಚ್ಚುವರಿಯಾಗಿ ಗ್ರಾಮೀಣಾಭಿವೃದ್ಧಿ ಇಲಾಖೆಯ ಸಹಯೊಗದೊಂದಿಗೆ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 750 ವರ್ಕ್‌ಶೆಡ್‌ಗಳನ್ನು ಹೆಚ್ಚುವರಿಯಾಗಿ ನಿರ್ಮಿಸಲು ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ:(3)ರಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ 750 ವರ್ಕ್‌ಶೆಡ್‌ಗಳನ್ನು ಹೆಚ್ಚುವರಿಯಾಗಿ ನಿರ್ಮಿಸಲು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯು ಟಿಪ್ಪಣಿ ಕಂಡಿಕೆ-4ರಲ್ಲಿ ಸಹಮತಿ ನೀಡಿ ಆದೇಶಿಸಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಈ ಕೆಳಕಂಡ ಆದೇಶ

**<u>ಸರ್ಕಾರದ ಆದೇಶ ಸಂಖ್ಯೆ:ಕೌಉಜೀಇ 56 ಉಜೀಇ 2022, ಬೆಂಗಳೂರು, ದಿನಾಂಕ:13-04-2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ ಮಾನ್ಯ ಮುಖ್ಯಮಂತ್ರಿಯವರು ಮಂಡಿಸಿದ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-204(ಈ)ರಲ್ಲಿ ಘೋಷಿಸಿರುವಂತೆ ಗ್ರಾಮ ಪಂಚಾಯಿತಿ ಮಟ್ಟದ ಒಕ್ಕೂಟ ವ್ಯಾಪ್ತಿಗೆ ಬರುವ ಸ್ವ-ಸಹಾಯ ಗುಂಪುಗಳ ಮೂಲಕ

--2

ಅನುಷ್ಠಾನಗೊಳಿಸುತ್ತಿರುವ ಹೈನುಗಾರಿಕೆ, ಕೃಷಿ ಮತ್ತು ಕೃಷಿಯೇತರ ಜೀವನೋಪಾಯ ಚಟುವಟಿಕೆಯಂತಹ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಅನುಕೂಲವಾಗುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಸಹಯೋಗದೊಂದಿಗೆ ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಅನುಬಂಧದಲ್ಲಿ ತಿಳಿಸಿರುವಂತೆ ಎಲ್ಲಾ 31 ಜಿಲ್ಲೆಗಳಲ್ಲಿ 750 ವರ್ಕ್‌ಶೆಡ್‌ಗಳನ್ನು ಹೆಚ್ಚುವರಿಯಾಗಿ ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶಿಸಿದೆ.

ಸದರಿ ಕಾರ್ಯಕ್ರಮವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯಡಿ ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 285 ವೆಚ್ಚ-9/2022, ದಿ:11-04-2022 ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ: PDS/51/MED/2022, ದಿನಾಂಕ:08-04-2022ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಈ ಆದೇಶವನ್ನು ಕಡತ ಸಂಖ್ಯೆ: ಕೌಉಜೀಇ 56 ಉಜೀಇ 2022 (ಭಾಗ-2)ರ ಕಂಡಿಕೆ 4ರಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/04/2022

(ರಂಗನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು
ಜೀವನೋಪಾಯ ಇಲಾಖೆ.

**ಇವರಿಗೆ:**

1. ಮಹಾಲೇಖಪಾಲರು, (ಎ&ಇ), (ಜಿ&ಎಸ್.ಎಸ್.ಎ), (ಇ&ಆರ್.ಎಸ್.ಎ), ಕರ್ನಾಟಕ ಬೆಂಗಳೂರು.
2. ಆಯುಕ್ತರು, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ಬೆಂಗಳೂರು.
3. ಆಯುಕ್ತರು, ಮಹಾತ್ಮ ಗಾಂಧಿ ನರೇಗಾ ಆಯುಕ್ತಾಲಯ, ಬೆಂಗಳೂರು.
3. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಜಿವನೋಪಾಯ, ಬೆಂಗಳೂರು.
4. ಸರ್ಕಾರದ ಜಂಟಿ ಕಾರ್ಯದರ್ಶಿ, ಮಾನವ ಅಭಿವೃದ್ಧಿ ವಿಭಾಗ, ಯೋಜನಾ ಇಲಾಖೆ, ಬೆಂಗಳೂರು.
5. ಖಜಾನಾಧಿಕಾರಿ, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
6. ಉಪ ನಿರ್ದೇಶಕರು, ಖಜಾನೆ ಎನ್.ಎಂ.ಸಿ ಖನಿಜ ಭವನ, ರೇಸ್ ಕೋರ್ಸ್‌ರೋಡ್, ಬೆಂಗಳೂರು.
7. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವೆಚ್ಚ 3& 9, ವಿಧಾನ ಸೌಧ ಬೆಂಗಳೂರು.

**ಪ್ರತಿ:-**

1. ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, (ಹಿರಿಯ ಶ್ರೇಣಿ), ಬೆಂಗಳೂರು.

3. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
4. ಸರ್ಕಾರದ ಅಪರ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
5. ಸರ್ಕಾರದ ಅಧೀನ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ.
6. ಅಧೀಕ್ಷಕರು, ಶಾಖೆ-1, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ & ಜೀವನೋಪಾಯ ಇಲಾಖೆ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.